ಕರ್ನಾಟಕ ಸರಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ಕಾರ್ಯಾಲಯ ಬೀದರ

ಸಂಖ್ಯೆ:ಜಿ2/ಖಾಪ್ರಾಶಾ/ಅನುಮತಿ/ 04/2012-13 | 238 ದಿನಾಂಕ:17-04-2012

## ನಮೂನೆ-2

ನಿಯಮ 3 ಉಪನಿಯಮ 5(ಬಿ)

ಪ್ರಮಾಣ ಪತ್ರ ಸಂಖ್ಯೆ: 04/2012-13

ಶರಣ ಬಸವೇಶ್ವರ ವಿದ್ಯಾ ವರ್ಧಕ ಸಂಘ ಗುಲಬರ್ಗಾ ಇವರ ಗವರ್ನಿಂಗ್ ಕೌನ್ಸಲ್ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ-1995 ಸೆಕ್ಷನ 31 ರಂತೆ ಈ ದಿನಾಂಕದಿಂದ 17-04-2012 ರಂದು ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ನಡೆಸಲು ನೊಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| 1 | ನೊಂದಣಿ ಸಂಖ್ಯೆ | 04/2012-13 |
| 2 | ಶಿಕ್ಷಣ ಸಂಸ್ಥೆಯ ವಿವರ | ಶರಣ ಬಸವೇಶ್ವರ ವಿದ್ಯಾ ವರ್ಧಕ ಸಂಘ ಗುಲಬರ್ಗಾ |
| 3 | ಅನುಮತಿ ನೀಡಿದ ಪ್ರಾಥಮಿಕ ಶಾಲೆಯ ಹೆಸರು | ಶರಣ ಬಸವಾ ಪಬ್ಲಿಕ್ ಕಿರಿಯ ಪ್ರಾಥಮಿಕ ಶಾಲೆ ಗೋರನಳ್ಳಿ ತಾ:ಜಿ: ಬೀದರ. |
| 4 | ಅನುಮತಿ ನೀಡಿದ ತರಗತಿ | 1 ರಿಂದ 5 ನೇ ತರಗತಿ |
| 5 | ಪ್ರಾರಂಭಿಸಬೇಕಾದ ತರಗತಿಗಳು ಹಾಗೂ ಶೈಕ್ಷಣೀಕ ವರ್ಷ | 1 ನೇ ತರಗತಿ 2012-13<br>2 ನೇ ತರಗತಿ 2013-14<br>3 ನೇ ತರಗತಿ 2014-15<br>4 ನೇ ತರಗತಿ 2015-16<br>5 ನೇ ತರಗತಿ 2016-17 |
| 6 | ಅನುಮತಿ ನೀಡದ ಮಾಧ್ಯಮ | ಕನ್ನಡ ಮಾಧ್ಯಮ |
| 7 | ಶುಲ್ಕ ಪಾವತಿ ಮಾಡಿರುವ ವಿವರ | 1.ಹುಂಡಿ ಸಂಖ್ಯೆ :405823<br>2.ದಿನಾಂಕ: :28-10-11<br>3.ಮೊತ್ತ :5000.00 |

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ 04 ಪುಟ ಸಂಖ್ಯೆ : 01 ಮತ್ತು 02 ವ್ಯಾಲ್ಯೂಂ ಸಂಖ್ಯೆ 02 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ.

ಈ ನೊಂದಣಿ ಪ್ರಮಾನಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ.ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಮೇಲ್ಕಂಡ (ನೊಂದಣಿ) ಅನುಮತಿಯನ್ನು ರದ್ದು ಪಡಿಸುವ ಅಧಿಕಾರವನ್ನು ಇಲಾಕೆಯು ಕಾಯ್ದಿರಿಸಿಕೊಂಡಿದೆ.

1) ಈ ನೊಂದಣಿಯು ನಿಯಮ 3(5)(4) ಕ್ಕೆ ಒಳಪಟ್ಟಿರುತ್ತದೆ.
2) ಗವರ್ನಿಂಗ್ ಕೌನ್ಸಿಲ್ ಇವರು ನಿಯಮ 4(4) ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
3) ಶಾಲಾ ನಿವೇಶನದ ವಿಸ್ತೀರ್ಣ,ಕಟ್ಟಡ,ಪಾಠೋಪಕರಣ,ಪೀಠೋಪಕರಣಗಳು,ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು ಮುಂತಾದವುಗಳು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.
4) ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರಕಾರದ ಪುರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
5) ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
6) ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಆಡಳಿತ ಮಂಡಳಿಯವರು ಅದೇ ಸ್ಥಳದಲ್ಲೆಯೇ ಮತ್ತು ಅದೇ ಹೆಸರಿನಲ್ಲಿಯೇ ನಡೆಸತಕ್ಕದ್ದು.ಮತ್ತು ಯಾವುದೇ ಕಾರಣಕ್ಕೂ ಸಕ್ಷಮ ಪ್ರಾಧಿಕಾರವಾದ ಸರಕಾರದ ಪೂರ್ವಾನುಮತಿ ಇಲ್ಲದೆ ಸ್ಥಳಾಂತರಿಸತಕ್ಕದ್ದು.
7) ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸಿರುವ ಎಲ್ಲಾ ಸರಕಾರಿ ಆದೇಶಗಳನ್ನು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು.ಕರ್ನಾಟಕ ಶಿಕ್ಷಣ ಮಸೂದೆ 1983 (ಆಕ್ಟ- ಆಫ್ 1995) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಇದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

PRINCIPAL
Sharnbasava Public School
Gornalli, BIDAR-585 403.

8) ಈ ಪ್ರಾಥಮಿಕ ಶಾಲಾ ನೋಂದಣಿಯು ಸರಕಾರಿ ಅಧಿಸೂಚನೆ ಸಂಖ್ಯೆ:ಇಡಿ:175 ಪಿ.ಎಂ.ಸಿ.95 ದಿನಾಂಕ:07-09-1998 ಮತ್ತು 29-12-1998 ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿ (Permanently Without Aid) ಆಡಳಿತ ಮಂಡಳಿಯು ಸರಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದೂ ರೂ 20.00 ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.

9) ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮ 1999 ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು ಅವುಗಳಿಗೆ ಬದ್ಧರಾಗಿರತಕ್ಕದ್ದು.

10) ಇಲಾಖೆ ಹಾಗೂ ಸರಕಾರ ನಿಗದಿಪಡಿಸಿದ ಪಠ್ಯ ಪುಸ್ತಕ,ಪರೀಕ್ಷಾ ಕ್ರಮ ಇತ್ಯಾದಿ ತಪ್ಪದೇ ಅಳವಡಿಸತಕ್ಕದ್ದು.

11) ಅನುಮತಿ ಪಡೆದ 2 ತಿಂಗಳೊಳಗಾಗಿ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಅಕ್ಟ್ 1 ಆಫ್ 1995 ) ರ ಪ್ರಕಾರ ಸೆಕ್ಷನ 36 ರಿಂದ 39 ರಿತ್ಯಾದ ಹಾಗೂ ಇಡಿ 131 ವಿವಧ 98 ಬೆಂಗಳೂರು ದಿನಾಂಕ:04-11-1999 ರಂತೆ ಮಾನ್ಯತೆ ಹಾಗೂ ಸಕ್ಷಮ ಪ್ರಾಧಿಕಾರಿಗಳಿಗೆ ಮಾನ್ಯತೆ ಗಾಗಿ ಅರ್ಜಿ ಸಲ್ಲಿಸತಕ್ಕದ್ದು.

12) ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲೆಯ ಉಪ ನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.

13) ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಪಾಲಿಸತಕ್ಕದ್ದು.

14) ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.

15) ಪ್ರತಿ ವರ್ಷವು ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

16) ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8 ರ ಅಡಿಯಲ್ಲಿ ಉಪಬಂಧ 36-39 ರಂತೆ ನೋಂದಾಯಿಸಿದ ಎಲ್ಲಾ ಶಾಲೆಗಳು ಮಾನ್ಯತೆ ಹಾಗೂ ತಾತ್ಕಾಲಿಕ ಮಾನ್ಯತೆ ವ್ಯಾಪ್ತಿಗೆ ಬರುವುದು.

17) ಶಾಲಾ ಕೆಲಸದ ವೇಳೆ ಮತ್ತು ದಿನಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.

18) ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೊಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ ಎರಡು ತಿಂಗಳೊಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗೆ ರದ್ದಾಗುವುದು.

19) ಶಾಲೆಯಲ್ಲಿ ನೇಮಕಗೊಂಡ ಸಿಬ್ಬಂದಿಯವರ ಸೇವಾ ಪುಸ್ತಕ ತೆರೆದು ಅದರಲ್ಲಿ ಅವರ ಸೇವಾ ವಿವರಗಳನ್ನು ನಿಯಮಾನುಸಾರ ಕಡ್ಡಾಯವಾಗಿ ದಾಖಲಿಸಿ ನಿರ್ವಹಿಸುವುದು. (ಸೇವಾ ಭದ್ರತೆ ನಿಯಮ ತಪ್ಪದೆ ಪಾಲಿಸತಕ್ಕದ್ದು)

20) 2012-13 ನೇ ಸಾಲಿಗೆ 1ರಿಂದ 5 ನೇ ತರಗತಿ ಪ್ರಾರಂಭಿಸಲು ನೊಂದಾಯಿಸಿರುವುದರಿಂದ 2.3.4 ಮತ್ತು 5 ನೇ ತರಗತಿಯನ್ನು ಸ್ವಾಭಾವಿಕ ಬೆಳವಣಿಗೆ ಆಧಾರದ ಮೇಲೆ ಪ್ರಾರಂಭಿಸುವುದು.

21) ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಯಾವುದೇ ದಾಖಲೆಗಳು ಸುಳ್ಳು ದಾಖಲೆಗಳೆಂದು ಕಂಡು ಬಂದಲ್ಲಿ ಈ ನೊಂದಣಿಯನ್ನು ರದ್ದು ಪಡಿಸಲಾಗುವುದು.

22) ಶಾಲಾ ಶಿಕ್ಷಕರನ್ನು ಗಣತಿ ಕಾರ್ಯಕ್ಕೆ ನಿಯೋಜಿಸುವುದು.

23) ವಿದ್ಯಾರ್ಥಿ/ವಿದ್ಯಾರ್ಥಿನಿಯವರಿಗೆ ಪ್ರತ್ಯೇಕ ಶೌಚಾಲಯ ಹಾಗೂ ಕುಡಿಯುವ ನೀರಿನ ಸೌಲಭ್ಯ ಒದಗಿಸುವುದು.

(ಹೆಚ್.ಆರ್.ಬಸಪ್ಪ)
ಉಪನಿರ್ದೇಶಕರು (ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ ಬೀದರ.

ಗೆ,
ಅಧ್ಯಕ್ಷರು/ಕಾರ್ಯದರ್ಶಿಗಳು
ಶರಣ ಬಸವೇಶ್ವರ ವಿದ್ಯಾ ವರ್ಧಕ ಸಂಘ ಗುಲಬರ್ಗಾ

ಪ್ರತಿಯನ್ನು

1.ಮಾನ್ಯ ನಿರ್ದೇಶಕರು ಆಯುಕ್ತರ ಕಛೇರಿ ಸಾರ್ವಜನಿಕ ಶಿಕ್ಷಣ ಇಲಾಖೆ ಗುಲಬರ್ಗಾ.
2.ಮಾನ್ಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು ಜಿಲ್ಲಾ ಪಂಚಾಯತ್ ಬೀದರ.
3.ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಾರ್ವಜನಿಕ ಶಿಕ್ಷಣ ಇಲಾಖೆ ಬೀದರ.

PRINCIPAL
Sharnbasava Public School
Gornalli, BIDAR-585 403.

ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ಕಾರ್ಯಾಲಯ ಬೀದರ

ಸಂಖ್ಯೆ:ಡಿ2/ಖಾಪ್ರಾಶಾ/ಅನುಮತಿ/152/2016-17 1927 ದಿನಾಂಕ:31-03-2017

ನಮೂನೆ-2

ನಿಯಮ 3 ಉಪನಿಯಮ 5(ಬಿ)

ಪ್ರಮಾಣ ಪತ್ರ ಸಂಖ್ಯೆ: 22/2017-18

ಶರಣ ಬಸವೇಶ್ವರ ವಿದ್ಯಾವರ್ಧಕ ಸಂಘ ಗುಲಬರ್ಗಾ ಇವರ ಗವರ್ನಿಂಗ್ ಕೌನ್ಸಿಲ್ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ-1995 ಸೆಕ್ಷನ 31 ರಂತೆ ಈ ದಿನಾಂಕದಿಂದ 31-03-2017 ರಂದು ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ನಡೆಸಲು ನೊಂದಾಯಿಸಲಾಗಿದೆ ಎಂದು ಪ್ರಮಾಣಿಕರಿಸಲಾಗಿದೆ.

| | | | |
|---|---|---|---|
| 1 | ನೊಂದಣಿ ಸಂಖ್ಯೆ | 22/2017-18 | |
| 2 | ಶಿಕ್ಷಣ ಸಂಸ್ಥೆಯ ವಿವರ | ಶರಣ ಬಸವೇಶ್ವರ ವಿದ್ಯಾವರ್ಧಕ ಸಂಘ ಗುಲಬರ್ಗಾ | |
| 3 | ಅನುಮತಿ ನೀಡಿದ ಪ್ರಾಥಮಿಕ ಶಾಲೆಯ ಹೆಸರು | ಶರಣ ಬಸವಾ ಪಬ್ಲಿಕ್ ಹಿರಿಯ ಪ್ರಾಥಮಿಕ ಶಾಲೆ ಗೋರನಳ್ಳಿ ತಾ:ಜಿ:ಬೀದರ. | |
| | ಅನುಮತಿ ನೀಡಿದ ತರಗತಿ | 6 ರಿಂದ 8 ನೇ ತರಗತಿ | |
| 5 | ಪ್ರಾರಂಭಿಸಬೇಕಾದ ತರಗತಿಗಳು ಹಾಗೂ ಶೈಕ್ಷಣಿಕ ವರ್ಷ | 6 ನೇ ತರಗತಿ 2017-18<br>7 ನೇ ತರಗತಿ 2018-19<br>8 ನೇ ತರಗತಿ 2019-20 | |
| 6 | ಅನುಮತಿ ನೀಡಿದ ಮಾಧ್ಯಮ | ಆಂಗ್ಲ ಮಾಧ್ಯಮ | |
| 7 | ಶುಲ್ಕ ಪಾವತಿ ಮಾಡಿರುವ ವಿವರ | ನೊಂದಣಿ ಶುಲ್ಕ: 100000.00 | ಸಂಸ್ಕರಣಾ ಶುಲ್ಕ:20000.00 |

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ 21 ಪುಟ ಸಂಖ್ಯೆ : 84 ಮತ್ತು 85 ವ್ಯಾಲ್ಯೂಂ ಸಂಖ್ಯೆ 03 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೊಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ.

ಈ ನೊಂದಣಿ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ.ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಮೇಲ್ಕಂಡ (ನೊಂದಣಿ) ಅನುಮತಿಯನ್ನು ರದ್ದು ಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.

1) ಈ ನೊಂದಣಿಯು ನಿಯಮ 3(5)(4) ಕ್ಕೆ ಒಳಪಟ್ಟಿರುತ್ತದೆ.

2) ಗವರ್ನಿಂಗ್ ಕೌನ್ಸಿಲ್ ಇವರು ನಿಯಮ 4(4) ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.

3) ಶಾಲಾ ನಿವೇಶನದ ವಿಸ್ತೀರ್ಣ,ಕಟ್ಟಡ,ಪಾಠೋಪಕರಣ,ಪೀಠೋಪಕರಣಗಳು,ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು ಮುಂತಾದವುಗಳು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

4) ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.

5) ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

6) ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಆಡಳಿತ ಮಂಡಳಿಯವರು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿಯೇ ನಡೆಸತಕ್ಕದ್ದು,ಮತ್ತು ಯಾವುದೇ ಕಾರಣಕ್ಕೂ ಸಕ್ಷಮ ಪ್ರಾಧಿಕಾರವಾದ ಸರಕಾರದ ಪೂರ್ವಾನುಮತಿ ಇಲ್ಲದೆ ಸ್ಥಳಾಂತರಿಸತಕ್ಕದ್ದಲ್ಲ.

7) ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸಿರುವ ಎಲ್ಲಾ ಸರಕಾರಿ ಆದೇಶಗಳನ್ನು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು,ಕರ್ನಾಟಕ ಶಿಕ್ಷಣ ಮಸೂದೆ 1983 (ಆಕ್ಟ- ಆಫ್ 1995) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಇದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

8) ಈ ಪ್ರಾಥಮಿಕ ಶಾಲಾ ನೊಂದಣಿಯು ಸರಕಾರಿ ಅಧಿಸೂಚನೆ ಸಂಖ್ಯೆ:ಇಡಿ:175 ಪಿ.ಎಂ.ಸಿ.95 ದಿನಾಂಕ:07-09-1998 ಮತ್ತು 29-12-1998 ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿ (Permanently Without Aid) ಆಡಳಿತ ಮಂಡಳಿಯು ಸರಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದೂ ರೂ 20.00 ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣಿಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.

9) ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮ 1999 ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು ಅವುಗಳಿಗೆ ಬದ್ಧರಾಗಿರತಕ್ಕದ್ದು.

10) ಇಲಾಖೆ ಹಾಗೂ ಸರಕಾರ ನಿಗದಿಪಡಿಸಿದ ಪಠ್ಯ ಪುಸ್ತಕ,ಪರೀಕ್ಷಾ ಕ್ರಮ ಇತ್ಯಾದಿ ತಪ್ಪದೇ ಅಳವಡಿಸತಕ್ಕದ್ದು.

13/7/17

PRINCIPAL
Sharnbasava Public School
Gornalli, BIDAR-585 403.

11) ಅನುಮತಿ ಪಡೆದ 2 ತಿಂಗಳೊಳಗಾಗಿ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಆಕ್ಟ್ 1 ಆಫ್ 1995 ) ರ ಪ್ರಕಾರ ಸೆಕ್ಷನ 36 ರಿಂದ 39 ರಿತ್ಯಾದ ಹಾಗೂ ಇಡಿ 131 ವಿವಧ 98 ಬೆಂಗಳೂರು ದಿನಾಂಕ:04-11-1999 ರಂತೆ ಮಾನ್ಯತೆ ಹಾಗೂ ಸಕ್ಷಮ ಪ್ರಾಧಿಕಾರಿಗಳಿಗೆ ಮಾನ್ಯತೆಗಾಗಿ ಅರ್ಜಿ ಸಲ್ಲಿಸತಕ್ಕದ್ದು.

12) ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲೆಯ ಉಪ ನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.

13) ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಪಾಲಿಸತಕ್ಕದ್ದು.

14) ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.

15) ಪ್ರತಿ ವರ್ಷವು ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

16) ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8 ರ ಅಡಿಯಲ್ಲಿ ಉಪಬಂಧ 36-39 ರಂತೆ ನೊಂದಾಯಿಸಿದ ಎಲ್ಲಾ ಶಾಲೆಗಳು ಮಾನ್ಯತೆ ಹಾಗೂ ತಾತ್ಕಾಲಿಕ ಮಾನ್ಯತೆ ವ್ಯಾಪ್ತಿಗೆ ಬರುವುದು.

17) ಶಾಲಾ ಕೆಲಸದ ವೇಳೆ ಮತ್ತು ದಿನಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.

18) ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೊಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ ಎರಡು ತಿಂಗಳೊಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗೆ ರದ್ದಾಗುವುದು.

19) ಶಾಲೆಯಲ್ಲಿ ನೇಮಕಗೊಂಡ ಸಿಬ್ಬಂದಿಯವರ ಸೇವಾ ಪುಸ್ತಕ ತೆರೆದು ಅದರಲ್ಲಿ ಅವರ ಸೇವಾ ವಿವರಗಳನ್ನು ನಿಯಮಾನುಸಾರ ಕಡ್ಡಾಯವಾಗಿ ದಾಖಲಿಸಿ ನಿರ್ವಹಿಸುವುದು. (ಸೇವಾ ಭದ್ರತೆ ನಿಯಮ ತಪ್ಪದೆ ಪಾಲಿಸತಕ್ಕದ್ದು)

20) 2017-18 ನೇ ಸಾಲಿಗೆ 6 ರಿಂದ 8 ನೇ ತರಗತಿ ಪ್ರಾರಂಭಿಸಲು ನೊಂದಾಯಿಸಿರುವುದರಿಂದ 7 ಮತ್ತು 8 ನೇ ತರಗತಿಯನ್ನು ಸ್ವಾಭಾವಿಕ ಬೆಳವಣಿಗೆ ಆಧಾರದ ಮೇಲೆ ಪ್ರಾರಂಭಿಸುವುದು.

21) ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಯಾವುದೇ ದಾಖಲೆಗಳು ಸುಳ್ಳು ದಾಖಲೆಗಳೆಂದು ಕಂಡು ಬಂದಲ್ಲಿ ಈ ನೊಂದಣಿಯನ್ನು ರದ್ದು ಪಡಿಸಲಾಗುವುದು.

22) ಶಾಲಾ ಶಿಕ್ಷಕರನ್ನು ಗಣತಿ ಕಾರ್ಯಕ್ಕೆ ನಿಯೋಜಿಸುವುದು.

23) ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ಶೌಚಾಲಯ ಹಾಗೂ ಕುಡಿಯುವ ನೀರಿನ ಸೌಲಭ್ಯ ಒದಗಿಸುವುದು.

24) ಸರ್ಕಾರದ ಆದೇಶ ಸಂಖ್ಯೆ:ಇಡಿ:369:ಪಿಜಿಸಿ:2014 ದಿನಾಂಕ:11-11-2014 ಹಾಗೂ 05-09-2015 ರಂತೆ ಶಾಲೆಯು ಎಲ್ಲಾ ಅಗತ್ಯ ಮೂಲಭೂತ ಸೌಕರ್ಯಗಳು ಹೊಂದಿರತಕ್ಕದ್ದು.ಶಾಲಾ ಅನುಮತಿ ನೀಡಲು ಸ್ಥಳ ಪರಿಶೀಲನೆ ಸಂದರ್ಭದಲ್ಲಿ ಕೊರತೆ ಇರುವ ಎಲ್ಲಾ ಅಗತ್ಯ ಮೂಲಭೂತ ಸೌಕರ್ಯಗಳು ಮೂರು ತಿಂಗಳೊಳಗಾಗಿ ಪೂರೈಸಿ ಶಾಲೆಗೆ ಪ್ರಥಮ ಮಾನ್ಯತೆ ಕೋರುವುದು. ಒಂದು ವೇಳೆ ಸರ್ಕಾರದ ಆದೇಶದಲ್ಲಿ ವಿಧಿಸಿರುವ ಷರತ್ತುಗಳು ಪೂರೈಸದೇ ಇದ್ದಲ್ಲಿ ಪ್ರಥಮ ಮಾನ್ಯತೆ ನೀಡುವ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಈ ಕಛೇರಿಗೆ ವರದಿ ಮಾಡುವುದು.

25) ಕರ್ನಾಟಕ ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆ ನಿಯಮಗಳು-2012 ರಡಿ ಕಡ್ಡಾಯವಾಗಿ ಶೇ 25% ಉಚಿತ ದಾಖಲಾತಿ ಪಡೆಯುವುದು.

(ಹೆಚ್.ಬಿ.ಚಂದ್ರಶೇಖರ)
ಉಪನಿರ್ದೇಶಕರು (ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ ಬೀದರ

31/3/17

ಗೆ,
ಅಧ್ಯಕ್ಷರು
ಶರಣ ಬಸವೇಶ್ವರ ವಿದ್ಯಾವರ್ಧಕ ಸಂಘ
ಗುಲಬರ್ಗಾ

ಪ್ರತಿಯನ್ನು
1.ಮಾನ್ಯ ನಿರ್ದೇಶಕರು ಆಯುಕ್ತರ ಕಛೇರಿ ಸಾರ್ವಜನಿಕ ಶಿಕ್ಷಣ ಇಲಾಖೆ ಗುಲಬರ್ಗಾ.
2.ಮಾನ್ಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು ಜಿಲ್ಲಾ ಪಂಚಾಯತ್ ಬೀದರ.
3.ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಾರ್ವಜನಿಕ ಶಿಕ್ಷಣ ಇಲಾಖೆ ಬೀದರ.

PRINCIPAL
Sharnbasava Public School
Gornalli, BIDAR-585 403.

ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ಕಛೇರಿ ಬೀದರ ಜಿಲ್ಲೆ- ಬೀದರ.

ಸಂಖ್ಯೆ:ಜಿ2/ಖಾಪ್ರಾಶಾ/ಮಾಧ್ಯಮ ಪರಿವರ್ತನೆ/2020-21 |614 ದಿನಾಂಕ:19-07-2021

ನಮೂನೆ-04

ನಿಯಮ-3 ಉಪ ನಿಯಮ7

ಪರಿವರ್ತಿತ ನೊಂದಣಿ ಪ್ರಮಾಣ ಪತ್ರ ಸಂಖ್ಯೆ-02/2020-21

ಶ್ರೀ ಶರಣ ಬಸವೇಶ್ವರ ವಿದ್ಯಾವರ್ಧಕ ಸಂಘ ಗುಲಬರ್ಗಾ ಇವರ ಗವರ್ನಿಂಗ್ ಕೌನ್ಸಿಲ್ ಸಲ್ಲಿಸಿರುವ ಪ್ರಸ್ತಾವನೆಯನ್ನು ಕನಾಟಕ ಶಿಕ್ಷಣ ಕಾಯೆ-1983 (ಕರ್ನಾಟಕ ಆಕ್ಟ 1-1995 ಸೆಕ್ಷನ್ 31 ರಂತೆ ಮತ್ತು Karnataka Education Institution (Classification and Registration) Rules-1997 ರ ನಿಯಮ 3ರ ಉಪ ನಿಯಮ7 ರಂತೆ ಈ ಶಿಕ್ಷಣ ಸಂಸ್ಥೆಯ ಅಡಿಯಲ್ಲಿ ಕೆಳಗಿನ ತರಗತಿಗಳನ್ನು ನಡೆಸಲು ನೊಂದಾಯಿಸಲಾಗಿದೆ.

| ಕ್ರಸ | ಶಿಕ್ಷಣ ಸಂಸ್ಥೆಯ ವಿವರ | ಅನುಮತಿ ನೀಡಿದ ಪ್ರಾಥಮಿಕ ಶಾಲೆಯ ಹೆಸರು | ಅನುಮತಿ ನೀಡಿದ ತರಗತಿಗಳು | ಪ್ರಾರಂಭಿಸಬೇಕಾದ ತರಗತಿಗಳು | ಈಗಾಗಲೆ ನಡೆಯುತ್ತಿರುವ ಮಾಧ್ಯಮ | ಶುಲ್ಕ ಪಾವತಿ ಮಾಡಿರುವ ವಿವರ |
|---|---|---|---|---|---|---|
| 1 | ಶರಣ ಬಸವೇಶ್ವರ ವಿದ್ಯಾವರ್ಧಕ ಸಂಘ ಗುಲಬರ್ಗಾ | ಶರಣ ಬಸವ ಪಬ್ಲಿಕ್ ಕಿರಿಯ ಪ್ರಾಥಮಿಕ ಶಾಲೆ ಗೋರನಳ್ಳಿ ತಾ.ಜಿ.ಬೀದರ | 01 ರಿಂದ 05ನೇ ತರಗತಿ | 01 ರಿಂದ 05 ನೇ ತರಗತಿ | ಕನ್ನಡ | ಶುಲ್ಕ 5000.00 |

ಶಾಲೆಯನ್ನು ಪರಿವರ್ತಿಸಲು ಸಂಸ್ಥೆಯವರು ಮೇಲೆ ನಮೂದಿಸಿದಂತೆ ನಿಯಮ 31 ರ ಉಪ ನಿಯಮ 1 ರಂತೆ ಈ ಮೊದಲು ನೊಂದಣಿ ಮಾಡಿದ ಶಾಲೆಯ ವಿವರಗಳನ್ನು ದಾಖಲಿಸಿರುತ್ತಾರೆ ಮತ್ತು ಪ್ರಸ್ತುತ ಈಗಾಗಲೆ ಶಾಲೆ ನೊಂದಣಿ ಮಾಡಿದ ಮೂಲ ನೊಂದಣಿ ಪ್ರಮಾಣ ಪತ್ರವನ್ನು **ಉಪನಿರ್ದೇಶಕರು, ಸಾ.ಶಿ.ಇಲಾಖೆ, ಬೀದರ ಇವರ ನೊಂದಣಿ ಸಂಖ್ಯೆ:04/2012-13 ದಿನಾಂಕ:17-04-2012** ರನ್ವಯ ಜಾರಿಗೊಳಿಸಿದ ಪ್ರಮಾಣ ಪತ್ರವನ್ನು ಈ ಮೂಲಕ ಹಿಂಪಡೆದು ರದ್ದುಪಡಿಸಲಾಗಿದೆ. ಹಾಗೂ ಈ ಮೊದಲು ಜಾರಿ ಮಾಡಿದ ನೊಂದಣಿ ಪ್ರಾಧಿಕಾರಿಗಳು ತಮ್ಮ ರಜಿಸ್ಟರಿನಲ್ಲಿ ಅವಶ್ಯಕ ಸೂಕ್ತ ಬದಲಾವಣೆ ಮಾಡತಕ್ಕದ್ದು, ಪರಿವರ್ತಿತ ನೊಂದಣಿ ಪ್ರಮಾಣ ಪತ್ರವನ್ನು ಇವರಿಗೆ ಈ ಕೆಳಗಿನಂತೆ ತರಗತಿ ನಡೆಸಲು ಅನುಮತಿ ನೀಡಿದೆ.

| ಕ್ರಸ | ಶಿಕ್ಷಣ ಸಂಸ್ಥೆಯ ವಿವರ | ಪರಿವರ್ತಿತ ನೊಂದಣಿ ಮಾಡಿದ ಶಾಲೆಯ ಹೆಸರು | ಅನುಮತಿ ನೀಡಿದ ತರಗತಿಗಳು | ಶೈಕ್ಷಣಿಕ ವರ್ಷ | ಮಾಧ್ಯಮ |
|---|---|---|---|---|---|
| 1 | ಶರಣ ಬಸವೇಶ್ವರ ವಿದ್ಯಾವರ್ಧಕ ಸಂಘ ಗುಲಬರ್ಗಾ | ಶರಣ ಬಸವ ಪಬ್ಲಿಕ್ ಕಿರಿಯ ಪ್ರಾಥಮಿಕ ಶಾಲೆ ಗೋರನಳ್ಳಿ ತಾ.ಜಿ.ಬೀದರ | 01 ರಿಂದ 05ನೇ ತರಗತಿ | 2020-21 | ಆಂಗ್ಲ |

ಸರ್ಕಾರದ ಆದೇಶ ಸಂಖ್ಯೆ:ಇಡಿ:155 ಪಿಜಿಸಿ:2015 ದಿನಾಂಕ:05-09-2015 ರನ್ವಯ 1 ರಿಂದ 5 ನೇ ತರಗತಿ 2015-16 ನೇ ಸಾಲಿನಿಂದ ಆಂಗ್ಲ ಮಾಧ್ಯಮಕ್ಕೆ ಪರಿವರ್ತನೆ ನೀಡಲು ಅನುಮತಿ ನೀಡಿರುವ ಹಿನ್ನಲೆಯಲ್ಲಿ ಸದರಿ ಶಿಕ್ಷಣ ಸಂಸ್ಥೆಯ ಕ್ರಮ ಸಂಖ್ಯೆ 02 ಪುಟ ಸಂಖ್ಯೆ: 38 ಮತ್ತು 39 ವ್ಯಾಲ್ಯುಂ ಸಂಖ್ಯೆ:01 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋದಣಿ ವಹಿಯಲ್ಲಿ ನೋದಾಯಿಸಲಾಗಿದೆ. ಈ ನೋಂದಣಿ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ, ಯಾವುದೇ ಷರತ್ತು ಉಲ್ಲಂಘಿಸಿದಲ್ಲಿ ಮೇಲ್ಕಂಡ (ನೊಂದಣಿ) ಅನುಮತಿಯನ್ನು ರದ್ದುಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.

**ಷರತ್ತುಗಳು**

1. ನೊಂದಣಿಯು ನಿಯಮ 3(5)(4) ಒಳಪಟ್ಟಿರುತ್ತದೆ ಹಾಗೂ ಗವರ್ನಿಂಗ್ ಕೌನ್ಸಿಲ್ ಇವರು ನಿಯಮ 4(4) ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
2. ಶಾಲಾ ನಿವೇಶನದ ವಿಸ್ತೀರ್ಣ,ಕಟ್ಟಡ,ಪಾಠೋಪಕರಣಗಳು, ಪೀಠೋಪಕರಗಳು, ಸಿಬ್ಬಂದಿ ವರ್ಗ, ಆರ್ಥಿಕ ಅನುಕೂಲತೆಗಳು ಮುಂತಾದವುಗಳು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.
3. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯು ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
4. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ

PRINCIPAL
Shambasava Public School
Gornalli,BIDAR-585403

5. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಆಡಳಿತ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿಯೇ ನಡೆಸತಕ್ಕದ್ದು, ಮತ್ತು ಯಾವುದೇ ಕಾರಣಕ್ಕೂ ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಸ್ಥಳಾಂತರ ಮತ್ತು ಹಸ್ತಾಂತರ ಮಾಡುವಂತಿಲ್ಲ.

6. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು, ಕರ್ನಾಟಕ ಶಿಕ್ಷಣ ಮಸೂದೆ 1983 (ಆ್ಯಕ್ಟ 1ಆಫ್ 1995 ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಇದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

7. ಈ ಪ್ರಾಥಮಿಕ ಶಾಲಾ ನೊಂದಣಿಯು ಸಾರಿ ಅಧಿಸೂಚನೆ ಸಂಖ್ಯೆ:ಇಡಿ:175 ಪಿಎಂಸಿ 95 ದಿನಾಂಕ:07–0–1998 ಮತ್ತು 29–12–1998 ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿ ಆಡಳಿತ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಯೂ ರೂ 20.00 ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.

8. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ ) ನಿಯಮ 1999 ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು,ಹಾಗೂ ಅವುಗಳಿಗೆ ಬದ್ಧರಾಗಿರತಕ್ಕದ್ದು.

9. ಇಲಾಖೆ ಹಾಗೂ ಸರ್ಕಾರ ನಿಗದಿಪಡಿಸಿ ಪಠ್ಯಪುಸ್ತಕ,ಪರೀಕ್ಷೆ ಕ್ರಮ,ಇತ್ಯಾದಿ ತಪ್ಪದೇ ಅಳವಡಿಸತಕ್ಕದ್ದು.

10. ಪರಿವರ್ತನೆ ಅನುಮತಿ ಪಡೆದ 2 ತಿಂಗಳೊಳಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಆ್ಯಕ್ಟ 1 ಆಫ್ 1995) ರ ಪ್ರಕಾರ ಸೆಕ್ಷನ್ 36 ರಿಂದ 39 ರೀತ್ಯಾ ಹಾಗೂ ಇಡಿ:131 ವಿವಿಧ 98 ಬೆಂಗಳೂರ ದಿನಾಂಕ:04–11–1999 ರಂತೆ ಮಾನ್ಯತೆ ಹಾಗೂ ಸಕ್ಷಮ ಪ್ರಾಧಿಕಾರಿಗಳಿಗೆ ಮಾನ್ಯತೆಗಾಗಿ ಅರ್ಜಿ ಸಲ್ಲಿಸತಕ್ಕದ್ದು.

11. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲೆಯ ಉಪ ನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು,

12. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಪಾಲಿಸತಕ್ಕದ್ದು.

13. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿರುವ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.

14. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

15. ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8 ರ ಅಡಿಯಲ್ಲಿ ಉಪಬಂಧ36–39 ರಂತೆ ನೊಂದಾಯಿಸಿದ ಎಲ್ಲಾ ಶಾಲೆಗಳು ಮಾನ್ಯತೆ ಹಾಗೂ ತಾತ್ಕಾಲಿಕ ಮಾನ್ಯತೆ ವ್ಯಾಪ್ತಿಗೆ ಬರುವುದು.

16. ಶಾಲಾ ಕೆಲಸದ ವೇಳೆ ಮತ್ತು ದಿನಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.

17. ಹೊಸದಾಗಿ ಆಂಗ್ಲ ಮಾಧ್ಯಮಕ್ಕೆ ಪರಿವರ್ತನೆಯಾದ ಎರಡು ತಿಂಗಳ ಒಳಗಾಗಿ ಶಾಲೆಗೆ ಪ್ರಥಮ ಮಾನ್ಯತೆಯನ್ನು ಕಡ್ಡಾಯವಾಗಿ ಪಡೆಯತಕ್ಕದ್ದು.ಒಂದು ವೇಳೆ ಪ್ರಥಮ ಮಾನ್ಯತೆ ಪಡೆಯದೇ ಶಾಲೆ ನಡೆಸಿದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತನ್ನಿಂತಾನೇ ರದ್ದಾಗುವುದು.

18. ಶಾಲೆಯಲ್ಲಿ ನೇಮಕಗೊಂಡ ಸಿಬ್ಬಂದಿಯವರ ಸೇವಾ ಪುಸ್ತಕ ತೆರೆದು ಅದರಲ್ಲಿ ಅವರ ಸೇವಾ ವಿವರಗಳನ್ನು ನಿಯಮಾನುಸಾರ ಕಡ್ಡಾಯವಾಗಿ ದಾಖಲಿಸಿ ನಿರ್ವಹಿಸುವುದು.

19. ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ಮಂಜೂರಾತಿಯಿಂದ ಇತರೆ ಮಾಧ್ಯಮದ ತರಗತಿಗಳಿಗೆ ಯಾವುದೇ ರೀತಿ ಧಕ್ಕೆಬಾರದಂತೆ ನೋಡಿಕೊಳ್ಳುವುದು.

20. ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಯಾವುದೇ ದಾಖಲೆಗಳು ಸುಳ್ಳು ದಾಖಲೆಗಳೆಂದು ಕಂಡುಬಂದಲ್ಲಿ ಯಾವ ಮುನ್ಸೂಚನೆಯನ್ನು ನೀಡದೇ ನೋಂದಣಿಯನ್ನು ರದ್ದುಪಡಿಸಲಾಗುವುದು.

21. ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ಶೌಚಾಲಯ ಒದಗಿಸುವುದು ಹಾಗೂ ಕುಡಿಯುವ ನೀರು ಸೌಲಭ್ಯ ಒದಗಿಸುವುದು.

22. ಸೇವಾ ಭದ್ರತೆಯಲ್ಲಿ ವಿಧಿಸಿದ ಎಲ್ಲಾ ಷರತ್ತುಗಳನ್ನು ಪೂರೈಸಿದಲ್ಲಿ ಮಾತ್ರ ಪ್ರಥಮ ಮಾನ್ಯತೆ ನವೀಕರಣ ನೀಡಲಾಗುವುದು.

23. ಮಕ್ಕಳ ಸುರಕ್ಷತೆಗೆ ಸಂಬಂಧಿಸಿದಂತೆ ಪೋಲಿಸ ಇಲಾಖೆ ಹಾಗೂ ಶಿಕ್ಷಣ ಇಲಾಖೆ ಹೊರಡಿಸಿರುವ ಮಾರ್ಗಸೂಚಿಯಂತೆ ಕ್ರಮವಹಿಸುವುದು.

PRINCIPAL
Shambasava Public School
Gornalli,BIDAR-585403

ಉಪ ನಿರ್ದೇಶಕರು (ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ ಬೀದರ.

ಪ್ರತಿಯನ್ನು

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆ ಬಹುಮಹಡಿ ಕಟ್ಟಡ ಬೆಂಗಳೂರು ರವರ ಮಾಹಿತಿಗಾಗಿ
2. ಮಾನ್ಯ ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಕಲಬುರಗಿ ರವರ ದಯಾಪರ ಮಾಹಿತಿಗಾಗಿ
3. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬೀದರ
4. ಅಧ್ಯಕ್ಷರು/ಕಾರ್ಯದರ್ಶಿಗಳು ಶರಣ ಬಸವೇಶ್ವರ ವಿದ್ಯಾವರ್ಧಕ ಸಂಘ ಗುಲಬರ್ಗಾ